**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾದಂ., ರವರ ನ್ಯಾಯಾಲಯ, ತರೀಕೆರೆ**
**ಸಂಚಾರಿ ನ್ಯಾಯಾಲಯ, ಅಜ್ಜಂಪುರ**

**ಸಿ.ಸಿ.ನಂಃ 03/2021**

**ಫಿರ್ಯಾದುದಾರರುಃ** ಸರ್ಕಾರದ ಪರವಾಗಿ ಅಜ್ಜಂಪುರ ಪೋಲೀಸರು

**-: ವಿರುದ್ಧ :-**

**ಆರೋಪಿ :** ಶ್ರೀ ಸತೀಶ,
ಬಿನ್ ಶ್ರೀ ಓಂಕಾರಪ್ಪ,
39 ವರ್ಷಗಳು,
ವಾಸಃ ಅಬ್ಬಿನಹೊಳಲು ಗ್ರಾಮ,
ಅಜ್ಜಂಪುರ ತಾಲ್ಲೂಕು.

**ದೋಷಾರೋಪಣೆ**

ಶ್ರೀ. ರಾಹುಲ್ ಶೆಟ್ಟಿಗಾರ್, ಬಿ.ಕಾಂ.(Hons.), ಎಲ್ಎಲ್.ಬಿ., ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾದಂ., ತರೀಕೆರೆ ಆದ ನಾನು ಆರೋಪಿಯಾದ ನಿಮ್ಮ ಮೇಲೆ ಮಾಡುವ ದೋಷಾರೋಪಣೆ ಏನೆಂದರೆಃ

ಚಾಸಾ-1/ ಶ್ರೀಮತಿ ಕಲ್ಪನ ರವರನ್ನು ನೀವು ಆರೋಪಿ 2013 ನೇ ಸಾಲಿನಲ್ಲಿ ಮದುವೆಯಾಗಿದ್ದು ಈಗ್ಗೆ ಎರಡು ವರ್ಷಗಳಿಂದ ಚಾಸಾ-1 ರವರಿಗೆ ದೈಹಿಕ ಮತ್ತು ಮಾನಸಿಕ ಹಿಂಸೆ ನೀಡಿರುತ್ತೀರಿ. ಈ ರೀತ್ಯ ಆರೋಪಿಯಾದ ನೀವು ಭಾರತ ದಂಡ ಸಂಹಿತೆ ಕಲಂ 498(ಎ) ರಂತೆ ದಂಢೀಸಲ್ಪಡುವ ಶಿಕ್ಷಾರ್ಹ ಅಪರಾದವನ್ನು ಈ ನ್ಯಾಯಾಲಯದ ಸಂಜ್ಞೆಯದೊಳಗೆ ಮಾಡಿರುತ್ತೀರಿ.

ಎರಡನೇಯದಾಗಿ ದಿನಾಂಕ 05.01.2020 ರಂದು ಬೆಳಿಗ್ಗೆ 10.00 ಗಂಟೆಗೆ ಅಜ್ಜಂಪುರ ಪೋಲೀಸ್ ಠಾಣಾ ಸರಹದ್ದಿನ ಅಬ್ಬಿನಹೊಳಲು ಗ್ರಾಮದಲ್ಲಿ ನೀವು ಆರೋಪಿ ಚಾಸಾ-1, ಚಾಸಾ-4/ ಶ್ರೀ ಹನುಮಪ್ಪ ಹಾಗೂ ಚಾಸಾ-5/ ಶ್ರೀಮತಿ ಗಂಗಮ್ಮ ರವರುಗಳಿಗೆ ಅವರ ಶಾಂತಿಭಂಗ ಮಾಡುವ ಉದ್ದೇಶದಿಂದ ಅವಾಚ್ಯ ಶಬ್ದಗಳಿಂದ ಬೈದು ಅವಮಾನಿಸಿರುತ್ತೀರಿ. ಈ ರೀತ್ಯ ಆರೋಪಿಯಾದ ನೀವು ಭಾರತ ದಂಡ ಸಂಹಿತೆ ಕಲಂ 504 ರಂತೆ ದಂಢೀಸಲ್ಪಡುವ ಶಿಕ್ಷಾರ್ಹ ಅಪರಾದವನ್ನು ಈ ನ್ಯಾಯಾಲಯದ ಸಂಜ್ಞೆಯದೊಳಗೆ ಮಾಡಿರುತ್ತೀರಿ.

ಕೊನೆಯದಾಗಿಮೇಲೆ ಹೇಳಿದ ದಿನಾಂಕ, ವೇಳೆ ಮತ್ತು ಸ್ಥಳದಲ್ಲಿ ನೀವು ಆರೋಪಿ ಚಾಸಾ-1 ರವರಿಗೆ ಕೊಲೆಬೆದರಿಕೆ ಹಾಕಿರುತ್ತೀರಿ. ಈ ರೀತ್ಯ ಆರೋಪಿಯಾದ ನೀವು ಭಾರತ ದಂಡ ಸಂಹಿತೆ ಕಲಂ 506 ರಂತೆ ದಂಢೀಸಲ್ಪಡುವ ಶಿಕ್ಷಾರ್ಹ ಅಪರಾದವನ್ನು ಈ ನ್ಯಾಯಾಲಯದ ಸಂಜ್ಞೆಯದೊಳಗೆ ಮಾಡಿರುತ್ತೀರಿ.

ಸದರಿ ಮೇಲ್ಕಂಡ ಆರೋಪಿಯಾದ ನೀವು ಈ ನ್ಯಾಯಾಲಯದ ಸಂಜ್ಞೆಯದೊಳಗೆ ಮೇಲೆ ಹೇಳಿದ ಅಪರಾದಗಳನ್ನು ಮಾಡಿದ್ದರಿಂದ, ಅವುಗಳು ಈ ನ್ಯಾಯಾಲಯದಿಂದ ವಿಚಾರಣೆ ಆಗತಕ್ಕದ್ದೆಂದು ಆದೇಶಿಸಲಾಗಿದೆ.

ಪ್ರಃ1. ಈಗ ಮೇಲೆ ಓದಿ ಹೇಳಿದ ದೋಷಾರೋಪಣೆಯನ್ನು ಕೇಳಿದಿರಾ? ಅವುಗಳು ನಿಮಗೆ ಅರ್ಥವಾಯಿತೇ?
ಆರೋಪಿ ಉತ್ತರಃ Yes

ಪ್ರಃ2. ನೀವು ದೋಷಾರೋಪಣೆಯನ್ನು ಒಪ್ಪಿಕೊಳ್ಳುವಿರೋ ಅಥವಾ ವಿಚಾರಣೆಯಾಗಬೇಕೋ?
ಆರೋಪಿ ಉತ್ತರಃ Pleaded not guilty and claimed to be tried

(ಆರೋಪಿಗೆ ದೋಷಾರೋಪಣೆಯನ್ನು ಅವರಿಗೆ ತಿಳಿಯುವ ಭಾಷೆಯಲ್ಲಿ ಓದಿ, ತಿಳಿಸಿ ಅವರ ಹೇಳಿಕೆಯನ್ನು ನನ್ನ ಸಮಕ್ಷಮದಲ್ಲಿ ಬರೆದುಕೊಳ್ಳಲಾಯಿತು. ಅದು ಸತ್ಯವಾಗಿಯೂ ಮತ್ತು ಸರಿಯಾಗಿಯೂ ಇರುತ್ತದೆ ಅಂತಾ ಪ್ರಮಾಣಿಕರಿಸುತ್ತೇನೆ)

ದಿನಾಂಕ : 14.11.2025

ಸಹಿ/-
(ರಾಹುಲ್ ಶೆಟ್ಟಿಗಾರ್)
ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರ.ದ.ನ್ಯಾದಂ., ತರೀಕೆರೆ.
(ಸಂಚಾರಿ ನ್ಯಾಯಾಲಯ, ಅಜ್ಜಂಪುರ)

ಆರೋಪಿ ಸಹಿಃ